# ಕರ್ನಾಟಕ ಸರ್ಕಾರದ ನಡವಳಿಗಳು

**ವಿಷಯ**: ನೂತನ ಪಿಂಚಣಿ ಯೋಜನೆಯ ಸಮಗ್ರ ಅನುಷ್ಠಾನಕ್ಕಾಗಿ ಸಮಿತಿಯನ್ನು ರಚಿಸುವ ಬಗ್ಗೆ.

**ಓದಲಾಗಿದೆ:**

1. ಸರ್ಕಾರದ ಆದೇಶ ಸಂಖ್ಯೆ: ಆಇ (ವಿಶೇಷ) 04 ಪಿಇಟಿ 2005, ದಿನಾಂಕ: 31.03.2006.
2. ಪಿಂಚಣಿ ನಿಧಿ ನಿಯಂತ್ರಣಾ ಮತ್ತು ಅಭಿವೃದ್ಧಿ ಪ್ರಾಧಿಕಾರ ರವರ ಪತ್ರ ಸಂಖ್ಯೆ: PFRDA/17/08/11/0021/2017-SUP-SG, ದಿನಾಂಕ: 24.08.2020.
3. ಖಜಾನೆ ಆಯುಕ್ತರ ಪತ್ರ ಸಂಖ್ಯೆ: DoT/NPS0ADM(GLC) 2/2021, ದಿನಾಂಕ: 21.04.2021.

**ಪ್ರಸ್ತಾವನೆ:**

ಮೇಲೆ ಓದಲಾದ (1) ರ ಸರ್ಕಾರದ ಆದೇಶದಲ್ಲಿ ದಿನಾಂಕ: 01.04.2006 ರಂದು ಹಾಗೂ ತದನಂತರ ಸರ್ಕಾರಿ ಸೇವೆಗೆ ಸೇರುವ ಎಲ್ಲಾ ಸರ್ಕಾರಿ ನೌಕರರಿಗೆ ನೂತನ ವ್ಯಾಖ್ಯಾನಿತ ಅಂಶದಾಯಿ ಕೊಡುಗೆ ಯೋಜನೆ ಪದ್ಧತಿಯನ್ನು ಕಡ್ಡಾಯಗೊಳಿಸಿ ಜಾರಿಗೆ ತಂದಿದೆ.

ಮೇಲೆ ಓದಲಾದ (2)ರ ಪತ್ರದಲ್ಲಿ ರಾಜ್ಯದಲ್ಲಿ ಈ ಯೋಜನೆಯ ಸಮಗ್ರ ಅನುಷ್ಠಾನಕ್ಕಾಗಿ ಹಾಗೂ ಯೋಜನೆಯ ಮೇಲ್ವಿಚಾರಣೆ ಹಾಗೂ ಪರಿಶೀಲನೆ ನಡೆಸಲು, ಕಾಲಕಾಲಕ್ಕೆ ಸಂಭವಿಸಬಹುದಾದ ಯಾವುದಾದರೂ ಆಡಳಿತಾತ್ಮಕ ವಿಷಯಗಳ ಉಸ್ತುವಾರಿ, ಎನ್.ಪಿ.ಎಸ್. ವಂತಿಗೆಯನ್ನು ವೇತನದಿಂದ ವಿಳಂಬವಾಗಿ ಕಟಾವಣೆ ಮತ್ತು ಪ್ರಾನ್ ಖಾತೆಗಳಿಗೆ ವಿಳಂಬ ಜಮೆಗಳನ್ನು ಮೇಲ್ವಿಚಾರಣೆ ಮಾಡುವ ಸಲುವಾಗಿ ಒಂದು ಸಮಿತಿಯನ್ನು ಸರ್ಕಾರದ ಪ್ರಧಾನ ಕಾರ್ಯದರ್ಶಿಗಳು (ಆರ್ಥಿಕ ಇಲಾಖೆ) / ಸರ್ಕಾರದ ಅಪರ ಮುಖ್ಯ ಕಾರ್ಯದರ್ಶಿಗಳು ರವರ ಅಧ್ಯಕ್ಷತೆಯಲ್ಲಿ ರಚಿಸಲು ಕೋರಿರುತ್ತಾರೆ.

ಮೇಲೆ ಓದಲಾದ (3) ರ ಖಜಾನೆ ಆಯುಕ್ತರ ಪತ್ರದಲ್ಲಿ ಎನ್.ಪಿ.ಎಸ್. ಪ್ರಗತಿ ಪರಿಶೀಲನೆಯೊಂದಿಗೆ ಕಾಲಕಾಲಕ್ಕೆ ಆಗುವಂತಹ ಮಾರ್ಪಾಡುಗಳನ್ನು ಅನುಷ್ಠಾನಗೊಳಿಸುವ ಬಗ್ಗೆ ಪರಿಶೀಲಿಸಲು ಹಾಗೂ ಸರ್ಕಾರದ ಆದೇಶ ಸಂಖ್ಯೆ: ಆಇ (ವಿಶೇಷ) 28 ಪಿಇಎನ್ 2009, ದಿನಾಂಕ: 29.03.2010ರಲ್ಲಿನ ನೂತನ ಪಿಂಚಣಿ ಯೋಜನೆಯನ್ನು ಅನುಷ್ಠಾನಗೊಳಿಸಲು ಮಾರ್ಗದರ್ಶನ ಹಾಗೂ ಕಾರ್ಯಾಚರಣೆಯ ವಿವರಗಳನ್ನು ಮರುಪರಿಶೀಲಿಸುವ ಅಗತ್ಯವಿರುತ್ತದೆ. ಇದರೊಂದಿಗೆ ಪ್ರತಿ ಪ್ರಕ್ರಿಯೆಗೂ ಸಮಯ (timeline) ನಿಗದಿಪಡಿಸುವ ಅವಶ್ಯಕತೆ ಇರುತ್ತದೆ. ಈ ಹಿನ್ನೆಲೆಯಲ್ಲಿ, ಪ್ರಸ್ತಾವನೆಗಳನ್ನು ತ್ವರಿತಗತಿಯಲ್ಲಿ ಇತ್ಯರ್ಥ ಪಡಿಸುವ ಸಲುವಾಗಿ ನೂತನ ಪಿಂಚಣಿ ಯೋಜನೆಯ ಪ್ರಗತಿ ಪರಿಶೀಲನಾ ಸಮಿತಿಯನ್ನು ರಚಿಸಲು ಪ್ರಸ್ತಾವನೆಯನ್ನು ಸಲ್ಲಿಸಿರುತ್ತಾರೆ.

...2..

ಪ್ರಸ್ತಾವನೆಯನ್ನು ಪರಿಶೀಲಿಸಿ ಈ ಕೆಳಕಂಡಂತೆ ಆದೇಶಿಸಲಾಗಿದೆ.

**ಸರ್ಕಾರದ ಆದೇಶ ಸಂಖ್ಯೆ: ಆಇ 114 ಪಿಇಎನ್ 2021, ಬೆಂಗಳೂರು, ದಿನಾಂಕ: 03.08.2021**

ಪ್ರಸ್ತಾವನೆಯಲ್ಲಿ ವಿವರಿಸಿರುವ ಅಂಶಗಳ ಹಿನ್ನೆಲೆಯಲ್ಲಿ, ನೂತನ ಪಿಂಚಣಿ ಯೋಜನೆಯ ಸಮಗ್ರ ಅನುಷ್ಠಾನಕ್ಕಾಗಿ ಸರ್ಕಾರವು ಈ ಕೆಳಕಂಡ ಅಧಿಕಾರಿಗಳ ಪ್ರಗತಿ ಪರಿಶೀಲನಾ ಸಮಿತಿಯನ್ನು ರಚಿಸಿದೆ:

| | | |
|---|---|---|
| 1 | ಸರ್ಕಾರದ ಅಪರ ಮುಖ್ಯ ಕಾರ್ಯದರ್ಶಿಗಳು, ಆರ್ಥಿಕ ಇಲಾಖೆ | ಅಧ್ಯಕ್ಷರು |
| 2 | ಸರ್ಕಾರದ ಕಾರ್ಯದರ್ಶಿಗಳು (ವೆಚ್ಚ), ಆರ್ಥಿಕ ಇಲಾಖೆ | ಸದಸ್ಯರು |
| 3 | ಆಯುಕ್ತರು, ಖಜಾನೆ ಇಲಾಖೆ | ಸದಸ್ಯರು |
| 4 | ಸರ್ಕಾರದ ಉಪ ಕಾರ್ಯದರ್ಶಿಗಳು, ಆರ್ಥಿಕ ಇಲಾಖೆ (ಆಯವ್ಯಯ ಮತ್ತು ಸಂಪನ್ಮೂಲ) | ಸದಸ್ಯರು |
| 5 | ಸರ್ಕಾರದ ಅಪರ ಕಾರ್ಯದರ್ಶಿಗಳು, ಆರ್ಥಿಕ ಇಲಾಖೆ (ಆಡಳಿತ ಮತ್ತು ಸಮನ್ವಯ) | ಸದಸ್ಯರು |
| 6 | ಜಂಟಿ ನಿರ್ದೇಶಕರು (ಎನ್.ಪಿ.ಎಸ್.), ಖಜಾನೆ ಆಯುಕ್ತರ ಕಛೇರಿ | ಸಂಚಾಲಕರು |

ಕರ್ನಾಟಕ ರಾಜ್ಯಪಾಲರ ಆದೇಶಾನುಸಾರ
ಮತ್ತು ಅವರ ಹೆಸರಿನಲ್ಲಿ

**(ಕುಮಟಾ ಪ್ರಕಾಶ್)**
ಸರ್ಕಾರದ ಅಧೀನ ಕಾರ್ಯದರ್ಶಿ,
ಆರ್ಥಿಕ ಇಲಾಖೆ (ವಿಶ್ರಾಂತಿ ವೇತನ ಮತ್ತು
ಆರ್ಥಿಕ ಆಯೋಗ ಕೋಶ).

03/08/2021

ಇವರಿಗೆ:-

1. ಮಹಾಲೇಖಪಾಲರು (ಎ ಮತ್ತು ಇ) / ಪ್ರಧಾನ ಮಹಾಲೇಖಪಾಲರು / ಲೆಕ್ಕಪರಿಶೋಧಕರು – ಬೆಂಗಳೂರು.
2. ಸರ್ಕಾರದ ಮುಖ್ಯ ಕಾರ್ಯದರ್ಶಿ, ವಿಧಾನ ಸೌಧ, ಬೆಂಗಳೂರು.

...3..

3. ಸರ್ಕಾರದ ಅಪರ ಮುಖ್ಯ ಕಾರ್ಯದರ್ಶಿ, ವಿಧಾನ ಸೌಧ, ಬೆಂಗಳೂರು.
4. ಸರ್ಕಾರದ ಎಲ್ಲಾ ಪ್ರಧಾನ ಕಾರ್ಯದರ್ಶಿಗಳು/ ಕಾರ್ಯದರ್ಶಿಗಳು.
5. ಆಯುಕ್ತರು, ಖಜಾನೆ ಆಯುಕ್ತಾಲಯ, 6ನೇ ಮಹಡಿ, ಕೆ.ಪಿ.ಸಿ.ಎಲ್. ಬಿಲ್ಡಿಂಗ್, ಅರಮನೆ ರಸ್ತೆ, ಬೆಂಗಳೂರು.
6. ಎಲ್ಲಾ ಇಲಾಖಾ ಮುಖ್ಯಸ್ಥರುಗಳು.
7. ಎಲ್ಲಾ ಜಿಲ್ಲಾಧಿಕಾರಿಗಳು.
8. ಎಲ್ಲಾ ಜಿಲ್ಲಾ ಪಂಚಾಯತ್ ರಾಜ್ ಮುಖ್ಯ ಕಾರ್ಯನಿರ್ವಾಹಣಾಧಿಕಾರಿಗಳು/ ಮುಖ್ಯ ಲೆಕ್ಕಾಧಿಕಾರಿಗಳು.
9. ಜಂಟಿ ನಿರ್ದೇಶಕರು, ರಾಜ್ಯ ಹುಜೂರು ಖಜಾನೆ, ಬೆಂಗಳೂರು.
10. ಎಲ್ಲಾ ಜಿಲ್ಲಾ ಖಜಾನಾಧಿಕಾರಿಗಳು.
11. ಜಂಟಿ ನಿರ್ದೇಶಕರು, ನೂತನ ಪಿಂಚಣಿ ಯೋಜನೆ ಘಟಕ, 5 ಮತ್ತು 6ನೇ ಮಹಡಿ, ಕೆ.ಪಿ.ಸಿ.ಎಲ್. ಬಿಲ್ಡಿಂಗ್, ಅರಮನೆ ರಸ್ತೆ, ಬೆಂಗಳೂರು..
12. ಉಪ ನಿರ್ದೇಶಕರು, ಟಿ.ಎನ್.ಎಂ.ಸಿ, ಖನಿಜ ಭವನ, ದೇವರಾಜ್ ಅರಸ್ ರಸ್ತೆ, ಬೆಂಗಳೂರು.
13. ಶಾಖಾ ರಕ್ಷಾ ಕಡತ/ಹೆಚ್ಚುವರಿ ಪ್ರತಿಗಳು.

www.finance.karnataka.gov.in